# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಎಸ್‌ಜಿಎಸ್‌ವೈಯಡಿ 2011-12ನೇ ಸಾಲಿನಲ್ಲಿ ಹಾಸನ ಜಿಲ್ಲಾ ಪಂಚಾಯತಿಗೆ ರಾಜ್ಯದ ಪಾಲಿನ ಎರಡನೇ ಕಂತಿನ ಉಳಿಕೆ ಅನುದಾನ ರೂ.14,64,000/- ಗಳನ್ನು 2012-13 ನೇ ಸಾಲಿನ ಎನ್‌ಆರ್‌ಎಲ್‌ಎಂ ಅನುದಾನದಿಂದ ಭರಿಸಿ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ:
(1) ಗ್ರಾಮೀಣಾಭಿವೃದ್ಧಿ ಮಂತ್ರಾಲಯದ ಪತ್ರದ ಸಂಖ್ಯೆ: ಜೆ 12022/07/2011- ಎಸ್‌ಜಿಎಸ್‌ವೈ-I (255) ದಿನಾಂಕ 16-03-2012 (ಮೂರು ಪತ್ರಗಳು).
(2) ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 13 ಎಸ್‌ಜೆವೈ 2011, ಬೆಂಗಳೂರು, ದಿನಾಂಕ : 29-03-2012 ಹಾಗೂ ತಿದ್ದುಪಡಿ ಸಂಖ್ಯೆ : ಗ್ರಾಅಪ 13 ಎಸ್‌ಜೆವೈ 2011, ಬೆಂಗಳೂರು, ದಿನಾಂಕ : 29-03-2012
(3) ಹಾಸನ ಜಿಲ್ಲಾ ಪಂಚಾಯತ್ ಪತ್ರದ ಕ್ರ.ಸಂ: ಜಿಪಂಹಾ/ ಎಸ್‌ಜಿಎಸ್‌ವೈ/ಆಡಿಟ್‌ವರದಿ/ಸಿಆರ್/111-12-13ದಿನಾಂಕ :24.11.2012
(4) ಆರ್ಥಿಕ ಇಲಾಖೆ (ವೆಚ್ಚ-6), ಬೆಂಗಳೂರು ಇವರ ಅನುಮೋದನೆ ಸಂಖ್ಯೆ :ಆಇ 366ವೆ-06/2012 ದಿನಾಂಕ 01.01.2013.

-:0:-

ಪ್ರಸ್ತಾವನೆ:

ಸ್ವರ್ಣ ಜಯಂತಿ ಗ್ರಾಮ ಸ್ವರೋಜ್‌ಗಾರ್ ಯೋಜನೆಯು (ಎಸ್‌ಜಿಎಸ್‌ವೈ) ಕೇಂದ್ರ ಪುರಸ್ಕೃತ ಯೋಜನೆಯಾಗಿದ್ದು, ಯೋಜನೆಯ ಮಾರ್ಗಸೂಚಿಯಂತೆ ಕೇಂದ್ರ ಮತ್ತು ರಾಜ್ಯ ಸರ್ಕಾರ ಅನುದಾನವನ್ನು 75 : 25 ರ ಅನುಪಾತದಲ್ಲಿ ಭರಿಸಬೇಕಾಗಿದೆ. ಕೇಂದ್ರ ಸರ್ಕಾರದ ಓದಲಾಗಿದೆ (1) ರ ಪತ್ರದಲ್ಲಿ ಹಾಸನ ಜಿಲ್ಲಾ ಪಂಚಾಯತಿಗೆ ಎರಡನೇ ಕಂತಿನ ಅನುದಾನವಾಗಿ ರೂ.74,87,000/- ಗಳನ್ನು ಬಿಡುಗಡೆ ಮಾಡಿದೆ. ಇದಕ್ಕನುಗುಣವಾಗಿ ರಾಜ್ಯದ ಪಾಲಿನ ಎರಡನೇ ಕಂತಿನ ಅನುದಾನವಾಗಿ ರೂ.24,96,000/- ಗಳನ್ನು ಬಿಡುಗಡೆ ಮಾಡಬೇಕಿತ್ತು. ಆದರೆ, 2011-12ನೇ ಸಾಲಿನ ರಾಜ್ಯದ ಆಯವ್ಯಯದಲ್ಲಿ ಹಾಸನ ಜಿಲ್ಲಾ ಪಂಚಾಯತಿಗೆ ರೂ.10,32,000/- ಮಾತ್ರ ಲಭ್ಯವಿದ್ದ ಕಾರಣ ಓದಲಾಗಿದೆ (2) ರಂತೆ ರೂ.10,32,000/- ಮಾತ್ರ ಬಿಡುಗಡೆ ಮಾಡಲಾಗಿತ್ತು.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್ ಹಾಸನ ರವರು ಓದಲಾಗಿದೆ [3]ರಲ್ಲಿ ರಾಜ್ಯದ ಪಾಲಿನ ಎರಡನೇ ಕಂತಿನ ಉಳಿಕೆ ಅನುದಾನ ರೂ.14,64,000/- ಬಿಡುಗಡೆ ಮಾಡುವಂತೆ ಕೋರಿರುತ್ತಾರೆ. ಆದಕಾರಣ, ಈ ಅನುದಾನವನ್ನು 2012-13ನೇ ಸಾಲಿನ ಅನುದಾನದಿಂದ ಭರಿಸಬೇಕಾಗಿದೆ. ಆದರೆ ಕೇಂದ್ರ ಸರ್ಕಾರ 2012-13ನೇ ಸಾಲಿಗೆ ಎಸ್‌ಜಿಎಸ್‌ವೈ ಯೋಜನೆಯ ಬದಲಿಗೆ ಆಜೀವಿಕ (ಎನ್‌ಆರ್‌ಎಲ್‌ಎಂ) ಜಾರಿಗೆ ಬರುವುದಾಗಿ ತಿಳಿಸಲಾಗಿತ್ತು. ಈ ಕಾರಣದಿಂದಾಗಿ, ಎಸ್‌ಜಿಎಸ್‌ವೈ ಪ್ರಧಾನ ಲೆಕ್ಕ ಶೀರ್ಷಿಕೆ '2501 ಗ್ರಾಮೀಣಾಭಿವೃದ್ಧಿಗಾಗಿ ವಿಶೇಷ ಕಾರ್ಯಕ್ರಮಗಳು 01 ಸಮಗ್ರ ಗ್ರಾಮೀಣಾಭಿವೃದ್ಧಿ ಕಾರ್ಯಕ್ರಮಗಳು-198 ಗ್ರಾಮ ಪಂಚಾಯತ್‌ಗಳಿಗೆ ಸಹಾಯ-6 ಗ್ರಾಮ ಪಂಚಾಯತ್‌ಗಳು-01-ಬ್ಲಾಕ್ ಅನುದಾನ ಕೇಂದ್ರ ಪುರಸ್ಕೃತ ಯೋಜನೆ (ಸ್ವರ್ಣ ಜಯಂತಿ ಗ್ರಾಮ ಸ್ವರೋಜ್‌ಗಾರ್ ಯೋಜನೆ) 2012-2013 ನೇ ಲಿಂಕ್ ಕೋಡ್ 2501-01-198-6-01' (ಹೊಸ ಜಿಲ್ಲಾ ಪಂಚಾಯತಿ ಕೋಡ್ 2501-01-101-0-13) ನಲ್ಲಿ 2012-13ನೇ ಸಾಲಿನಲ್ಲಿ ರಾಜ್ಯದ ಆಯವ್ಯಯದಲ್ಲಿ ಯಾವುದೇ ಅನುದಾನ ಕಾಯ್ದಿರಿಸಿಕೊಂಡಿರುವುದಿಲ್ಲ. ಆದರೆ 2011-12ನೇ ಸಾಲಿನಲ್ಲಿ ಎಸ್‌ಜಿಎಸ್‌ವೈ ಅನುಷ್ಠಾನಕ್ಕಾಗಿ ಕೇಂದ್ರ ಸರ್ಕಾರವು ಹಾಸನ ಜಿಲ್ಲಾ ಪಂಚಾಯತ್‌ಗೆ 2ನೇ ಕಂತಿನ ಅನುದಾನ ಬಿಡುಗಡೆ ಮಾಡಿದೆ. ಇದಕ್ಕನುಗುಣವಾಗಿ ರಾಜ್ಯದ ಪಾಲಿನ ಅನುದಾನವನ್ನು ಬಿಡುಗಡೆ ಮಾಡಲೇಬೇಕಾಗಿರುತ್ತದೆ. ಆದರೆ, ಲಭ್ಯತೆ ಆಧಾರದ ಮೇಲೆ ರೂ.10,32,000/- ಮಾತ್ರ ಬಿಡುಗಡೆ ಮಾಡಿದ್ದು ಉಳಿಕೆ 2ನೇ ಕಂತಿನ ಅನುದಾನ ರೂ.14,64,000/- ಬಿಡುಗಡೆ ಮಾಡಬೇಕಿದೆ. ಆದ್ದರಿಂದ ಎಸ್‌ಜಿಎಸ್‌ವೈ ಯೋಜನೆ ಬದಲಿಗೆ ಜಾರಿಗೆ ಬಂದಿರುವ ಆಜೀವಿಕ (ಎನ್‌ಆರ್‌ಎಲ್‌ಎಂ) ಯೋಜನೆಗಾಗಿ ಕಾಯ್ದಿರಿಸಲಾಗಿರುವ ಅನುದಾನದಿಂದ ಬಿಡುಗಡೆ ಮಾಡಬೇಕಾಗಿದೆ. ಕಾರಣ ರಾಜ್ಯದಲ್ಲಿ ಎನ್‌ಆರ್‌ಎಲ್‌ಎಂ ಅನುಷ್ಠಾನಕ್ಕಾಗಿ ಪೂರ್ವಭಾವಿ ಸಿದ್ಧತೆಗಳನ್ನು ಮಾಡಿಕೊಳ್ಳಲಾಗುತ್ತಿದೆ.

**ಎಸ್‌ಜಿಎಸ್ ವೈ ಯೋಜನೆ ಬದಲಿಗೆ ಜಾರಿಗೆ ಬಂದಿರುವ ಆಜೀವಿಕ (ಎನ್‌ಆರ್‌ಎಲ್‌ಎಂ)** ಯೋಜನೆಗಾಗಿ ಪ್ರಧಾನ ಲೆಕ್ಕ ಶೀರ್ಷಿಕೆ "2501 ಗ್ರಾಮೀಣಾಭಿವೃದ್ಧಿಗಾಗಿ ವಿಶೇಷ ಕಾರ್ಯಕ್ರಮಗಳು 01 ಸಮಗ್ರ ಗ್ರಾಮೀಣಾಭಿವೃದ್ಧಿ ಕಾರ್ಯಕ್ರಮಗಳು-198 ಗ್ರಾಮ ಪಂಚಾಯತ್‌ಗಳಿಗೆ ಸಹಾಯ-6 ಗ್ರಾಮ ಪಂಚಾಯತ್‌ಗಳು-01-ಬ್ಲಾಕ್ ಅನುದಾನ ಕೇಂದ್ರ ಪುರಸ್ಕೃತ ಯೋಜನೆ (ನ್ಯಾಷನಲ್ ರೂರಲ್ ಲೈವ್ಲಿ ಹುಡ್ ಪ್ರಾಜೆಕ್ಟ್ (ಎನ್‌ಆರ್‌ಎಲ್‌ಎಂ)) 2012-2013ನೇ ಲಿಂಕ್ ಕೋಡ್ 2501-01-198-6-01 " (ಹೊಸ. ಕೋಡ್ 2501-00-101-0-05) ನಲ್ಲಿ 2012-13ನೇ ಸಾಲಿನ ರಾಜ್ಯದ ಆಯವ್ಯಯದಲ್ಲಿ ಒಟ್ಟಾರೆ ಅನುದಾನ ಬಿಡುಗಡೆಗಾಗಿ ರೂ.1,20,00,00,000/- ಕಾಯ್ದಿರಿಸಲಾಗಿದೆ. ಈ ಪೈಕಿ ರಾಜ್ಯದ ಪಾಲಿನ ಅನುದಾನ ಬಿಡುಗಡೆಗಾಗಿ ರೂ.30,00,00,000/- ಕಾಯ್ದಿರಿಸಲಾಗಿದೆ.

ಆರ್ಥಿಕ ಇಲಾಖೆ ಓದಲಾಗಿದೆ (4)ರಲ್ಲಿ ಹಾಸನ ಜಿಲ್ಲಾ ಪಂಚಾಯತ್ 2011-12ನೇ ಸಾಲಿನ ರಾಜ್ಯದ ಪಾಲಿನ 2ನೇ ಕಂತಿನ ಉಳಿಕೆ ಅನುದಾನ ರೂ.14,64,000/- ಬಿಡುಗಡೆ ಮಾಡಲು ಸಹಮತಿ ನೀಡಿದೆ. ಇದರಂತೆ ಹಾಸನ ಜಿಲ್ಲಾ ಪಂಚಾಯತ್‌ಗೆ ರೂ.14,64,000/- ಬಿಡುಗಡೆ ಮಾಡಬೇಕಾಗಿದೆ. ಆದುದರಿಂದ ಈ ಆದೇಶ.

<u>ಸರ್ಕಾರದ ಆದೇಶ ಸಂಖ್ಯೆ : ಗ್ರಾಅಪ 13 ಎಸ್‌ಜಿವೈ 2011, ಬೆಂಗಳೂರು,</u>
<u>ದಿನಾಂಕ : 19.01.2013</u>

ರಾಜ್ಯ ಸರ್ಕಾರವು, ಸ್ವರ್ಣ ಜಯಂತಿ ಗ್ರಾಮ ಸ್ವರೋಜ್‌ಗಾರ್ ಯೋಜನೆಯಡಿ (ಎಸ್‌ಜಿಎಸ್‌ವೈ) 2011-12ನೇ ಸಾಲಿಗೆ ಕೇಂದ್ರ ಸರ್ಕಾರ ಹಾಸನ ಜಿಲ್ಲಾ ಪಂಚಾಯತ್‌ಗೆ ಬಿಡುಗಡೆ ಮಾಡಿದ 2ನೇ ಕಂತಿನ ಅನುದಾನಕ್ಕನುಗುಣವಾಗಿ ರಾಜ್ಯದ ಪಾಲಿನ ಎರಡನೇ ಕಂತಿನ ಉಳಿಕೆ ಅನುದಾನ ರೂ.14,64,000/- (ಹದಿನಾಲ್ಕು ಲಕ್ಷದ ಅರವತ್ತನಾಲ್ಕು ಸಾವಿರ ರೂಪಾಯಿಗಳು ಮಾತ್ರ) 2012-13ನೇ ಸಾಲಿನಲ್ಲಿ ಎನ್‌ಆರ್‌ಎಲ್‌ಎಂ ಅನುಷ್ಠಾನಕ್ಕಾಗಿ ನಿಗದಿಪಡಿಸಿರುವ 300 lump sum ಅನುದಾನದಿಂದ ಭರಿಸಿ ಅನುಬಂಧದಲ್ಲಿ ತೋರಿಸಿರುವಂತೆ ಕೆಳಕಂಡ ಷರತ್ತಿಗೊಳಪಟ್ಟು ಬಿಡುಗಡೆ ಮಾಡಲು ಮಂಜೂರಾತಿ ನೀಡಿದೆ.

<u>ಷರತ್ತುಗಳು:</u>

1999 ಮೇ ತಿಂಗಳ ಎಸ್‌ಜಿಎಸ್‌ವೈ ಕೈಪಿಡಿಯ ಮಾರ್ಗಸೂಚಿಯಂತೆ ಹಣವನ್ನು ಉಪಯೋಗಿಸುವುದು. ಅನುಷ್ಠಾನ ಏಜೆನ್ಸಿಗಳಿಗೆ ಸರ್ಕಾರಿ ಆದೇಶ ತಲುಪಿದ 15 ದಿವಸದೊಳಗೆ ಬಿಡುಗಡೆ ಮಾಡತಕ್ಕದ್ದು.

ಯೋಜನೆಯ ವೆಚ್ಚವನ್ನು ಪ್ರಧಾನ ಲೆಕ್ಕ ಶೀರ್ಷಿಕೆ "2501 ಗ್ರಾಮೀಣಾಭಿವೃದ್ಧಿಗಾಗಿ ವಿಶೇಷ ಕಾರ್ಯಕ್ರಮಗಳು 01 ಸಮಗ್ರ ಗ್ರಾಮೀಣಾಭಿವೃದ್ಧಿ ಕಾರ್ಯಕ್ರಮಗಳು-198 ಗ್ರಾಮ ಪಂಚಾಯತ್‌ಗಳಿಗೆ ಸಹಾಯ-6 ಗ್ರಾಮ ಪಂಚಾಯತ್‌ಗಳು-01-ಬ್ಲಾಕ್ ಅನುದಾನ ಕೇಂದ್ರ ಪುರಸ್ಕೃತ ಯೋಜನೆ [ನ್ಯಾಷನಲ್ ರೂರಲ್ ಲೈವ್ಲಿ ಹುಡ್ ಪ್ರಾಜೆಕ್ಟ್ (ಎನ್‌ಆರ್‌ಎಲ್‌ಎಂ)] 2012-2013ನೇ ಲಿಂಕ್ ಕೋಡ್ 2501-01-198-6-01 "(ಹೊಸ ಕೋಡ್ 2501-00-101-0-05) ಸಾಲಿನಲ್ಲಿ ಸರ್ಕಾರಿ ಆದೇಶ ಸಂಖ್ಯೆ : ಎಫ್‌ಡಿ 7 ಜೆಡ್‌ಪಿಎ 2003 ದಿನಾಂಕ 14-07-2005 ರನ್ವಯ ಖಜಾನೆಯಿಂದ ಪಡೆಯುವುದು.

ಹಾಸನ ಜಿಲ್ಲಾ ಪಂಚಾಯತಿಯ ಮುಖ್ಯ ಲೆಕ್ಕಾಧಿಕಾರಿಗಳಿಗೆ ಖಜಾನೆಯಿಂದ ಅನುದಾನವನ್ನು ಸೆಳೆಯಲು ಕಾನೂನು ರೀತ್ಯ ಅಧಿಕಾರ ನೀಡಲಾಗಿದೆ. ಖಜಾನೆಯಿಂದ ಅನುದಾನವನ್ನು ಪೇಯೀಸ್ ರಸೀದಿ ಮೇಲೆ ಸೆಳೆಯಲು ಆರ್ಥಿಕ ಇಲಾಖೆ (ವೆಚ್ಚ-6) ಯ ಸಂಖ್ಯೆ ಆಇ 172 ವೆಚ್ಚ-6/2011 ದಿನಾಂಕ 30-03-2011 ರಂತೆ ಸಹಮತಿಸಿದೆ. ಈ ಯೋಜನೆಯಡಿ ಕೇಂದ್ರ ಸರ್ಕಾರವು ನೇರವಾಗಿ ಜಿಲ್ಲಾ ಪಂಚಾಯತಿಗೆ ಬಿಡುಗಡೆ ಮಾಡಿರುವ ಅನುದಾನ ಮತ್ತು ರಾಜ್ಯದ ಪಾಲಿನ ಅನುದಾನವೂ ಸೇರಿದಂತೆ ಒಟ್ಟು ಅನುದಾನವನ್ನು ಸರ್ಕಾರದ ಸುತ್ತೋಲೆ ಸಂಖ್ಯೆ : ಗ್ರಾಅಪ 14 ಎಸ್‌ಜಿವೈ 2007 ದಿನಾಂಕ 18-04-2007 ರ ಸೂಚನೆಯಂತೆ ಕ್ರಮ ಕೈಗೊಳ್ಳುವುದು.

ಬಿಡುಗಡೆ ಮಾಡುವ ಅನುದಾನದ ಆಂತರಿಕ ಲೆಕ್ಕ ಪರಿಶೋಧನೆಯನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಮಾಡುವುದು.

2011-12 ನೇ ಸಾಲಿನ ಅನುಮೋದಿತ ವಾರ್ಷಿಕ ಯೋಜನೆಯನ್ನು ಹಾಸನ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಸರ್ಕಾರಕ್ಕೆ ಸಲ್ಲಿಸುವುದು.

ಆರ್ಥಿಕ ಮತ್ತು ಭೌತಿಕ ಸಾಧನೆಯ ಮಾಸಿಕ ಪ್ರಗತಿ ವರದಿಯನ್ನು ಪ್ರತಿ ಮಾಹೆಯ 5ನೇ ತಾರೀಖಿನೊಳಗೆ ಕೇಂದ್ರ ಸರ್ಕಾರದ online ಗೆ upload ಮಾಡಿ ಪ್ರತಿಯನ್ನು ಸ್ವ ಉದ್ಯೋಗ ಕಾರ್ಯಕ್ರಮಗಳ ಶಾಖೆಗೆ ತಪ್ಪದೇ ಕಳುಹಿಸುವುದು.

ಹಾಸನ ಜಿಲ್ಲಾ ಪಂಚಾಯತಿಯ ಮುಖ್ಯ ಲೆಕ್ಕಾಧಿಕಾರಿಗಳು ಹಣ ಉಪಯೋಗ ಪ್ರಮಾಣ ಪತ್ರ ಹಾಗೂ ಆಡಿಟ್ ಮಾಡಿದ ಲೆಕ್ಕಗಳನ್ನು ನಿರ್ದೇಶಕರು (ಸ್ವಉಕಾ) ಹಾಗೂ ಪ.ನಿ. ಸರ್ಕಾರದ ಉಪ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರಿಗೆ ತಪ್ಪದೇ ಕಳುಹಿಸುವುದು.

ಈ ಆದೇಶವನ್ನು ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಸಹಮತಿ ಸಂಖ್ಯೆ :ಗ್ರಾಅಪ ; 22 : ಪಿಬಿಎಸ್ 2013 ದಿನಾಂಕ 15.01.2013ರಂತೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಹಾ. ದೀಪ) 21/1/13
ನಿರ್ದೇಶಕರು (ಸ್ವಉಕಾ) ಹಾಗೂ
ಪ.ನಿ. ಸರ್ಕಾರದ ಉಪ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ: ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ ಇವರಿಗೆ ಮುಂದಿನ ರಾಜ್ಯಪತ್ರದಲ್ಲಿ ಪ್ರಕಟಿಸಲು ಕೋರಲಾಗಿದೆ. (ಎರಡು ಪ್ರತಿಗಳು)

ಪ್ರತಿ:

1. ಮಹಾಲೇಖಪಾಲರು,ಕರ್ನಾಟಕ, ಬೆಂಗಳೂರು
2. ನಿರ್ದೇಶಕರು (ಎಸ್‌ಜಿಎಸ್‌ವೈ), ಗ್ರಾಮೀಣಾಭಿವೃದ್ಧಿ ಮಂತ್ರಾಲಯ, ಭಾರತ ಸರ್ಕಾರ, ಸಾಮ್ರಾಟ್ ಹೋಟೆಲ್, ಚಾಣಕ್ಯಪುರಿ, ನವದೆಹಲಿ-110021
3. ಶಾಖಾಧಿಕಾರಿ (ಎಸ್‌ಜಿಎಸ್‌ವೈ), ಗ್ರಾಮೀಣಾಭಿವೃದ್ಧಿ ಮಂತ್ರಾಲಯ, ಭಾರತ ಸರ್ಕಾರ, ಸಾಮ್ರಾಟ್ ಹೋಟೆಲ್, ಚಾಣಕ್ಯಪುರಿ, ನವದೆಹಲಿ-110021
4. ಅಧ್ಯಕ್ಷರು, ಜಿಲ್ಲಾ ಪಂಚಾಯತ್, ಹಾಸನ ರವರ ಮಾಹಿತಿಗಾಗಿ
5. ಹಾಸನ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಮುಂದಿನ ಕ್ರಮಕ್ಕಾಗಿ.
6. ಹಾಸನ ಜಿಲ್ಲಾ ಪಂಚಾಯತಿಯ ಮುಖ್ಯ ಲೆಕ್ಕಾಧಿಕಾರಿಗಳಿಗೆ ಮುಂದಿನ ಕ್ರಮಕ್ಕಾಗಿ.
7. ನಿರ್ದೇಶಕರು, ಖಜಾನೆ ಇಲಾಖೆ, ಪೋಡಿಯಂ ಬ್ಲಾಕ್, ವಿವಿ ಟವರ್, ಬೆಂಗಳೂರು-560 001
8. ಉಪ ನಿರ್ದೇಶಕರು, ಖಜಾನೆ ನೆಟ್‌ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್, ನಂ.49, 2ನೇ ಮಹಡಿ, ಖನಿಜ ಭವನ (ಸರ್ಕಾರಿ ಬ್ಲಾಕ್) ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
9. ಹಾಸನ ಜಿಲ್ಲೆಯ ಖಜಾನಾಧಿಕಾರಿಗಳಿಗೆ ಮುಂದಿನ ಸೂಕ್ತ ಕಮಕ್ಕಾಗಿ
10. ಪ್ರಾದೇಶಿಕ ಆಯುಕ್ತರ ಆಪ್ತ ಕಾರ್ಯದರ್ಶಿ ಮೈಸೂರು ವಿಭಾಗ, ಮೈಸೂರು.
11. ಸಮಾವೇಶಕರು, ಎಸ್‌ಎಲ್‌ಬಿಸಿ, ಸಿಂಡಿಕೇಟ್ ಬ್ಯಾಂಕ್, ಕಾರ್ಪೋರೇಟ್ ಆಫೀಸ್, 5ನೇ ಮಹಡಿ,2ನೇ ಕ್ರಾಸ್, ಗಾಂಧಿನಗರ, ಬೆಂಗಳೂರು 560 009.
12. ಮಾನ್ಯ ಉಪ ಮುಖ್ಯಮಂತ್ರಿ ಹಾಗೂ ಗ್ರಾಅಪಂರಾ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.

13. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರವರ ಆಪ್ತ ಕಾರ್ಯದರ್ಶಿಗಳಿಗೆ,
14. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಯೋಜನಾ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ.
15. ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಸರ್ಕಾರದ ಕಾರ್ಯದರ್ಶಿ, ಗ್ರಾಅಪಂರಾ ಇವರ ಆಪ್ತ ಕಾರ್ಯದರ್ಶಿಗಳಿಗೆ.
16. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, (ವೆಚ್ಚ), ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
17. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಅಪಂರಾ ಇಲಾಖೆ ಇವರ ಆಪ್ತ ಸಹಾಯಕರಿಗೆ.
18. ಮುಖ್ಯ ಸಂಪಾದಕರು, ಕರ್ನಾಟಕ ವಿಕಾಸ, ಗ್ರಾಅಪಂರಾ ಇಲಾಖೆ, ಬೆಂಗಳೂರು
19. ಶಾಖಾಧಿಕಾರಿ, ಪತ್ರ ಸ್ವೀಕಾರ ಮತ್ತು ರವಾನೆ ಶಾಖೆ, ಗ್ರಾ ಅ ಪಂರಾ ಇಲಾಖೆ.
20. ವಿಶೇಷಾಧಿಕಾರಿಗಳು, ಗಣಕ ಕೋಶ, ಗ್ರಾ ಅ ಪಂ ರಾ ಇಲಾಖೆ.
21. ಹೆಚ್ಚಿನ ಪ್ರತಿ.

***

# ಅನುಬಂಧ

## ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 13 ಎಸ್‌ಜಿವೈ 2011, ಬೆಂಗಳೂರು
## ದಿನಾಂಕ 19.01.2013

[ರೂ.ಗಳಲ್ಲಿ]

| ಕ್ರ ಸಂ | ಜಿಲ್ಲಾ ಪಂಚಾಯತಿಯ ಹೆಸರು | ಡಿ.ಡಿ.ಓ ಕೋಡ್ | 2011-12 ನೇ ಸಾಲಿನಲ್ಲಿ ಕೇಂದ್ರ ಸರ್ಕಾರ ಬಿಡುಗಡೆ ಮಾಡಿದ ಎರಡನೇ ಕಂತಿನ ಅನುದಾನ | ಇದಕ್ಕನುಗುಣವಾಗಿ ರಾಜ್ಯ ಸರ್ಕಾರವು 2011-12ನೇ ಸಾಲಿನಲ್ಲಿ ಬಿಡುಗಡೆ ಮಾಡಬೇಕಿದ್ದ ಎರಡನೇ ಕಂತಿನ ಅನುದಾನ | ರಾಜ್ಯ ಸರ್ಕಾರವು 2011-12ನೇ ಸಾಲಿನಲ್ಲಿ ಬಿಡುಗಡೆ ಮಾಡಿದ್ದ 2ನೇ ಕಂತಿನ ಅನುದಾನ [ಲಭ್ಯತೆಗೆ ಅನುಸಾರ] | ರಾಜ್ಯ ಸರ್ಕಾರವು ಬಿಡುಗಡೆ ಮಾಡ ಬೇಕಿರುವ 2011-12ನೇ ಸಾಲಿನ 2ನೇ ಕಂತಿನ ಉಳಿಕೆ ಅನುದಾನ | ರಾಜ್ಯ ಸರ್ಕಾರವು 2011-12ನೇ ಸಾಲಿನ ಎರಡನೇ ಕಂತಿನ ಉಳಿಕೆ ಅನುದಾನ 2012-13ನೇ ಸಾಲಿನಲ್ಲಿ ಭರಿಸಿ ಬಿಡುಗಡೆ ಮಾಡುತ್ತಿರುವುದು |
|---|---|---|---|---|---|---|---|
| 1 | 2 | 3 | 4 | 5 | 6 | 7 | 8 |
| 1 | ಹಾಸನ | 1300ZZ0003 | 74,87,000 | 24,96000 | 10,32,000 | 14,64,000 | 14,64,000 |

21/1/13
(ಎಂ. ದೀಪ)
ನಿರ್ದೇಶಕರು (ಸ್ವಉಕಾ) ಹಾಗೂ
ಪ.ನಿ. ಸರ್ಕಾರದ ಉಪ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.